**ಕರ್ನಾಟಕ ಸರ್ಕಾರ**

ಸಂಖ್ಯೆ: ಗ್ರಾಅಪ 239 ಗ್ರಾಪಂಅ 2014

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ: 14.03.2014

**ಇವರಿಂದ:**

ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ,

**ಇವರಿಗೆ:**

ರಾಜ್ಯದ ಎಲ್ಲಾ ಮುಖ್ಯ ಕಾರ್ಯನಿರ್ವಾಹಕಾಧಿಕಾರಿಗಳು,
ಜಿಲ್ಲಾ ಪಂಚಾಯತಿಗಳು,

ಮಾನ್ಯರೆ,

**ವಿಷಯ:** ಇ-ಸ್ವತ್ತು ತಂತ್ರಾಂಶ ನಿರ್ವಹಣೆಯ ಬಗ್ಗೆ. ದಿನಾಂಕ: 20.03.2014ರ ಕಾರ್ಯಾಗಾರದ ಕುರಿತು

**ಉಲ್ಲೇಖ:** ಸುತ್ತೋಲೆ ಸಂಖ್ಯೆ ಗ್ರಾಅಪ 83 ಗ್ರಾಪಂಅ 2013 ದಿನಾಂಕ: 03.02.2014.

*****

ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿನ ಸ್ಥಿರಾಸ್ತಿಗಳಿಗೆ ಸಂಬಂಧಿಸಿದಂತೆ ಪಂಚಾಯತಿ ನಮೂನೆ-9, 11ಎ ಮತ್ತು 11ಬಿ ಗಳನ್ನು ವಿತರಿಸುವಾಗ ಉದ್ಭವಿಸುವ ಹಲವಾರು ಸ್ಥಳೀಯ ಸಮಸ್ಯೆಗಳು ಹಾಗೂ ಇತರೆ ಸಾಧಕ ಭಾಧಕಗಳ ಬಗ್ಗೆ ಚರ್ಚಿಸಲು ಹಾಗೂ ಸಂಬಂಧಪಟ್ಟ ತಾಂತ್ರಿಕ ವರ್ಗದವರಿಂದ ಪರಿಹಾರಗಳನ್ನು ಪಡೆದುಕೊಳ್ಳಲು ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳಿಗೆ ದಿನಾಂಕ: 20.03.2014ರಂದು ಒಂದು ದಿನದ ಕಾರ್ಯಾಗಾರವನ್ನು ಅಪರ ಮುಖ್ಯ ಕಾರ್ಯದರ್ಶಿಗಳ ಸಮ್ಮುಖದಲ್ಲಿ ಕೊಠಡಿ ಸಂಖ್ಯೆ 252, 2ನೇ ಮಹಡಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು, ಆಯೋಜಿಸಲು ಸರ್ಕಾರ ನಿರ್ಧರಿಸಿದೆ.

ಆದುದರಿಂದ ಎಲ್ಲಾ ಜಿಲ್ಲಾ ಪಂಚಾಯತಿ ಮುಖ್ಯ ಕಾರ್ಯನಿರ್ವಾಹಣಾಧಿಕಾರಿಗಳು ಪ್ರತಿ ಜಿಲ್ಲಾ ಪಂಚಾಯತಿಯಿಂದ ಇಬ್ಬರು ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳನ್ನು ಈ ಕಾರ್ಯಾಗಾರಕ್ಕೆ ತಪ್ಪದೆ ನಿಯೋಜಿಸಬೇಕೆಂದು ಕೋರಲಾಗಿದೆ. ಈ ರೀತಿ ನಿಯೋಜಿಸುವ ಮುನ್ನ, ಜಿಲ್ಲಾ ಪಂಚಾಯತಿ ವ್ಯಾಪ್ತಿಯ ಎಲ್ಲಾ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳ ಕಾರ್ಯಾಗಾರವನ್ನು ಆಯೋಜಿಸಿ ಅವರುಗಳಿಂದ ಇ-ಸ್ವತ್ತು ನಿರ್ವಹಣೆಯ ಬಗ್ಗೆ ಸ್ವೀಕೃತವಾಗುವ ಸಮಸ್ಯೆಗಳನ್ನು ಪಟ್ಟಿ ಮಾಡಿಕೊಂಡು ಅವುಗಳನ್ನು ಕಾರ್ಯಾಗಾರದಲ್ಲಿ ಒಪ್ಪಿಸುವಂತೆ ನಿಯೋಜಿತ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳಿಗೆ ಸೂಚಿಸುವಂತೆ ತಿಳಿಸಲಾಗಿದೆ.

ತಮ್ಮ ವಿಶ್ವಾಸಿ,

(ಕೆ.ಯಾಲಕ್ಕಿಗೌಡ) 15/3/14
ನಿರ್ದೇಶಕರು (ಪಂ.ರಾಜ್) ಹಾಗೂ
ಸರ್ಕಾರದ ಪದನಿಮಿತ್ತ ಜಂಟಿ ಕಾರ್ಯದರ್ಶಿ
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ